Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in** **principal@klsvdit.edu.in**

Date: 01-10-2022

**ಪತ್ರಿಕಾ ಪ್ರಕಟಣೆ:**

## ವಿ.ಡಿ.ಐ.ಟಿ. ಯಲ್ಲಿ ವಿಶ್ವ ಹಿರಿಯ ನಾಗರಿಕರ ದಿನ ಆಚರಣೆ

ಕೆ. ಎಲ್. ಎಸ್. ವಿ. ಡಿ. ಐ. ಟಿ. ಹಳಿಯಾಳದಲ್ಲಿ ವಿಶ್ವ ಹಿರಿಯ ನಾಗರಿಕರ ದಿನವನ್ನು ಅಕ್ಟೋಬರ್ 1ರಂದು ಆಚರಿಸಲಾಯಿತು. ಈ ಕಾರ್ಯಕ್ರಮಕ್ಕೆ ಗೌರವ ಅತಿಥಿಗಳಾಗಿ ಆಗಮಿಸಿದ್ದ ಹಳಿಯಾಳದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಾದ ಡಾ.ಲಕ್ಷ್ಮಿದೇವಿ ಎಸ್ ಅವರು " ಹಿರಿಯ ನಾಗರಿಕರಿಗೆ ಸರ್ಕಾರ ನೀಡುತ್ತಿರುವ ಸವಲತ್ತುಗಳನ್ನು ಸವಿಸ್ತಾರವಾಗಿ ವಿವರಿಸಿ, ಹಿರಿಯ ನಾಗರಿಕರು ಈ ಸವಲತ್ತುಗಳನ್ನು ಪಡೆದುಕೊಳ್ಳಬೇಕೆಂದು ಹೇಳಿದರು. ಹಿರಿಯರು ಆರೋಗ್ಯದ ಜೀವನಕ್ಕಾಗಿ ಅನುಸರಿಸಬೇಕಾದ ಆಹಾರ ಕ್ರಮವನ್ನು ವಿವರಿಸಿದರು. ಗೌರವ ಅತಿಥಿಗಳಾಗಿ ಆಗಮಿಸಿದ್ದ ಹಳಿಯಾಳದ ಹಿರಿಯ ನಾಗರಿಕ ವೇದಿಕೆಯ ಅಧ್ಯಕ್ಷರಾದ ಶ್ರೀ. ಜಿ. ಡಿ. ಗಂಗಧರ ಅವರು ವೃದ್ಧಾಪ್ಯದಲ್ಲಿ ರೂಢಿಸಿಕೊಳ್ಳಬೇಕಾದ ಕೆಲವು ಹವ್ಯಾಸಗಳ ಬಗೆಗೆ ತಿಳಿಸಿದರು. ಹಳಿಯಾಳದ ಹಿರಿಯ ನಾಗರಿಕರ ವೇದಿಕೆ ಕಳೆದ ಒಂದು ವರ್ಷಗಳಲ್ಲಿ ಹಮ್ಮಿಕೊಂಡ ಕಾರ್ಯಕ್ರಮಗಳ ಕಿರು ಪರಿಚಯ ನೀಡಿದರು.ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ವಿ. ಎ. ಕುಲಕರ್ಣಿಯವರು ಇಳಿವಯಸ್ಸಿನಲ್ಲಿ ಸಂಸಾರದ ಸಂಪೂರ್ಣ ಜವಾಬ್ದಾರಿಯನ್ನು ತಮ್ಮ ಹೆಗಲ ಮೇಲೆ ಇರಿಸಿಕೊಳ್ಳದೆ ಮಕ್ಕಳಿಗೆ ಜವಾಬ್ದಾರಿ ವಹಿಸಬೇಕೆಂದು ಹೇಳಿದರು. ಹಿರಿಯನಾಗರಿಕರು ಉತ್ತಮ ಸಮಾಜ ನಿರ್ಮಿಸಲು ಮಾರ್ಗದರ್ಶಕರು, ಅವರ ಆಶೀರ್ವಾದ ಬಹು ಮುಖ್ಯವೆಂದು ನುಡಿದರು. ಮಹಾವಿದ್ಯಾಲಯವು ಸೆಪ್ಟೆಂಬರ್ ತಿಂಗಳಿನಲ್ಲಿ ಹಿರಿಯ ನಾಗರಿಕರಿಗೋಸ್ಕರ ಮೊಬೈಲ್ ಬಳಕೆಯ ಬಗ್ಗೆ ಮಾಹಿತಿ ನೀಡುವ ಕಾರ್ಯಾಗಾರವನ್ನು ಆಯೋಜಿಸಿತ್ತು ಎಂದು ಹೇಳಿದರು. ಹಿರಿಯ ನಾಗರೀಕರ ದಿನಾಚರಣೆಯ ಅಂಗವಾಗಿ ಹಲವು ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು, ವಿಜೇತರಿಗೆ ಇದೇ ಸಂದರ್ಭದಲ್ಲಿ ಪುರಸ್ಕರಿಸಿ ಬಹುಮಾನ ವಿತರಿಸಲಾಯಿತು.

ಪ್ರೊ. ಫರಜಾನ ನದಾಫ್ ಸ್ವಾಗತಿಸಿದರು. ಆಡಳಿತ ವಿಭಾಗದ ಮುಖ್ಯಸ್ಥರಾದ ಪ್ರೊ. ಮಂಜುನಾಥ್ ಡಿ ವಂದಿಸಿದರು. ಪ್ರೊ. ಅಭಯ್ ಇಂಚಲ್ ನಿರೂಪಿಸಿದರು. ತೆರಗಾಂವ್ ಹಾಗೂ ಯಾಡೋಗಾದ ಹಿರಿಯ ನಾಗರಿಕ ವೇದಿಕೆಯ ಅಧ್ಯಕ್ಷರಾದ ಶ್ರೀ. ಅರವಿಂದ ಪಿ ಮತ್ತು ಶ್ರೀ.ಪಿ. ಬಿ. ಪಾಟೀಲ್, ನಿವೃತ್ತ ಸರಕಾರಿ ನೌಕರ ಸಂಘದ ಅಧ್ಯಕ್ಷರಾದ ಶ್ರೀ. ಸಾವಂತ್, ಶ್ರೀ.ಹೆಚ್. ಕೆ. ಪಾಟೀಲ್,ಶ್ರೀ. ಆರ್. ವೈ. ಚಿವಾಟಗುಂಡಿ ಉಪಸ್ಥಿತರಿದ್ದರು.90ಕ್ಕೂ ಅಧಿಕ ಹಿರಿಯ ನಾಗರಿಕರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಎನ್.ಎಸ್.ಎಸ್. ವಿಭಾಗದ ಮುಖ್ಯಸ್ಥರಾದ ಪ್ರೊ. ವಿರೂಪಾಕ್ಷ ಚೌಗುಲಾ ಈ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಸಾಂಸ್ಕೃತಿಕ ಕಾರ್ಯಕ್ರಮವನ್ನು ಸಹ ಈ ಸಂದರ್ಭದಲ್ಲಿ ಆಯೋಜಿಸಲಾಗಿತ್ತು.

ಪ್ರಾಂಶುಪಾಲರು

**Principal**
**KLS Vishwanathrao Deshpande**
**Institute of Technology, Haliyal**

